## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನೀಯರ್ ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಕೊಪ್ಪಳ ಇವರನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ – ಆದೇಶ.

**ಓದಲಾಗಿದೆ.**

1. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ದಿನಾಂಕ. 28-10-2011.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಜಿಪಂಕೊ / ಅಭಿವೃದ್ಧಿ/ ಪ್ರವರದಿ/ಶಿಸ್ತುಕ್ರಮ/2011-12, ದಿನಾಂಕ. 08-11-2011.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 28-10--2011ರ ಪತ್ರದಲ್ಲಿ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಕೊಪ್ಪಳ ಇವರು ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಇವರು ಕುಡಿಯುವ ನೀರು, ರಸ್ತೆ ಸಂಪರ್ಕ, ಸೇತುವೆ, ಚರಂಡಿ ಮುಂತಾದ ಕಾಮಗಾರಿಗಳ ನಿರ್ವಹಣೆಯಲ್ಲಿ ನಿಷ್ಕಾಳಜಿ ವಹಿಸಿದ್ದು, ಬಹುಹಳ್ಳಿಗಳ ಕುಡಿಯುವ ನೀರಿನ ಯೋಜನೆಯಲ್ಲಿ ಯಾವುದೇ ಪ್ರಗತಿಯಾಗದೇ ಇರುವುದರಿಂದ ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದಲ್ಲಿ ಯಾವ ರೀತಿ ಕ್ರಮ ಕೈಗೊಳ್ಳುವ ಬಗ್ಗೆ ಸಾಕಷ್ಟು ಸಭೆಗಳನ್ನು ಜರುಗಿಸಿ, ಸದರಿ ಕಾರ್ಯಪಾಲಕ ಇಂಜಿನಿಯರ್ ರವರಿಗೆ ಪ್ರಗತಿ ಸಾಧಿಸುವ ಕುರಿತು ಸೂಕ್ತ ತಿಳುವಳಿಕೆ ಮಾಡಿಕೊಟ್ಟರೂ ಸಹ ಪ್ರಗತಿಯಲ್ಲಿ ಶೂನ್ಯ ಸಾಧನೆ ಇರುತ್ತದೆ. ಅಲ್ಲದೇ, ಅವರ ಅಧೀನದಲ್ಲಿ ಬರುವ ಉಪ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳ ಮೇಲೆ ಯಾವುದೇ ರೀತಿ ಹಿಡಿತವಿರುವುದಿಲ್ಲವಾದ್ದರಿಂದ ಅವರುಗಳಿಂದ ಕೆಲಸ ತೆಗೆದುಕೊಳ್ಳುವುದು ಸಾಧ್ಯವಾಗುತ್ತಿಲ್ಲದಿರುವುದರಿಂದ, ಸದರಿ ಕಾರ್ಯಪಾಲಕ ಇಂಜಿನಿಯರ್ ರವರನ್ನು ಅಮಾನತ್ತಿನಲ್ಲಿಟ್ಟು, ಬೇರೆ ಸೂಕ್ತ ಉತ್ತಮ ಅಧಿಕಾರಿಗೆ ಅಧಿಕಾರ ವಹಿಸಿಕೊಡಬೇಕೆಂದು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 08-11--2011ರ ಅರೆ ಸರ್ಕಾರಿ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರು ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಇವರು ಅದಕ್ಷತೆಯಿಂದ ಕರ್ತವ್ಯನಿರ್ವಹಿಸುತ್ತಿರುವ ಕುರಿತು ಸದರಿಯವರಿಗೆ ಕಾರಣ ಕೇಳುವ ನೋಟೀಸಿನ ಮೂಲಕ ಎಚ್ಚರಿಕೆ ನೀಡಿದ್ದಾಗಲೂ ಕೂಡ ಸದರಿಯವರು ಅವರ ಕಾರ್ಯ ವೈಖರಿಯಲ್ಲಿ ದಕ್ಷತೆಯಿಂದ ಕೆಲಸ ನಿರ್ವಹಿಸುತ್ತಿಲ್ಲವೆಂದೂ ಬಹುಗ್ರಾಮ ಕುಡಿಯುವ ನೀರಿನ

----2

ಯೋಜನೆಗಳು ಕುಂಠಿತವಾಗಿದ್ದು, ಸುವರ್ಣ ಗ್ರಾಮೋದಯ ಯೋಜನೆಯಡಿ ಅನುದಾನ ಬಿಡುಗಡೆ ಮಾಡಿ ಅವಶ್ಯಕತೆಗೆ ಅನುಗುಣವಾಗಿ ಕೆಲಸ ಮುಗಿದ ಗ್ರಾಮಗಳಿಗೆ ಮತ್ತು ಆಸರೆ ಗ್ರಾಮಗಳಲ್ಲಿನ ಕೆಲಸಗಳಿಗೆ ಅನುದಾನ ಬಿಡುಗಡೆಗೆ ಪ್ರಾಶಸ್ತ್ಯ ನೀಡಿ ಅನುದಾನ ಬಿಡುಗಡೆ ಮಾಡಲು ತಿಳಿಸಿದ್ದಾಗ್ಯೂ ಸಹ ಆ ರೀತಿ ಮಾಡದೇ ದಿನನಿತ್ಯದ ಆಡಳಿತದಲ್ಲಿ ಸಮಸ್ಯೆಯನ್ನು ತಂದೊಡ್ಡಿದ್ದಾರೆ ಹಾಗೂ ತಮ್ಮ ಕೆಳಗಿನ ಅಧಿಕಾರಿಗಳಾದ ನಾಲ್ಕು ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸದಲ್ಲಿ ಪ್ರಗತಿ ಸಾಧಿಸುವಲ್ಲಿ ವಿಫಲರಾಗಿರುತ್ತಾರೆ. ಅಲ್ಲದೆ, ಪೂರ್ವಾಭಾವಿ ಅನುಮತಿ ಪಡೆಯದೇ ಮೇಲಿಂದ ಮೇಲೆ ಕೇಂದ್ರ ಸ್ಥಾನ ಬಿಟ್ಟು ಹೋಗುತ್ತಿರುವುದರಿಂದ ಜನಸಾಮಾನ್ಯರಿಗೆ ದಿನನಿತ್ಯದ ಆಡಳಿತದಲ್ಲಿ ತೊಂದರೆಯಾಗುತ್ತಿದ್ದು, ಇವರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಹಾಗೂ ಜಿಲ್ಲೆಯ ಆಡಳಿತ ಹಿತದೃಷ್ಟಿಯಿಂದ ಅವರನ್ನು ಬೇರೆ ಕಡೆಗೆ ವರ್ಗಾಯಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಇವರ ಅದಕ್ಷ ಕಾರ್ಯನಿರ್ವಹಣೆ, ನಿರ್ಲಕ್ಷ್ಯತೆಯಿಂದಾಗಿ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿದ್ದಲ್ಲದೇ ಹಿರಿಯ ಅಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಗಳನ್ನು ಪಾಲಿಸದೇ ಬೇಜವಾಬ್ದಾರಿ ವರ್ತನೆಯಿಂದಾಗಿ ದಿನನಿತ್ಯದ ಆಡಳಿತ ನಿರ್ವಹಣೆಯಲ್ಲಿ ಸಮಸ್ಯೆಗಳು ಉಂಟಾಗುತ್ತಿದ್ದು, ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳ ನಿಯಮ 3ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ತೀವ್ರತರವಾದ ಕರ್ತವ್ಯಲೋಪ ಎಸೆಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಪ್ರಕರಣದ ಸಂದರ್ಭ, ಸನ್ನಿವೇಶಗಳ ಗಂಭೀರತೆಯನ್ನು ಪರಿಗಣಿಸಿ, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10 (1) (ಡಿ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ.ಗ್ರಾಅಪ 46 ಇಎನ್‌ಕ್ಯೂ 2011, ಬೆಂಗಳೂರು,**
**ದಿನಾಂಕ. 22-12-2011**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ನೆಲೆಗಟ್ಟಿನಲ್ಲಿ, ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮ 10 (1) (ಡಿ) ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅವರುಗಳ ವಿರುದ್ಧದ ಇಲಾಖಾ ವಿಚಾರಣೆ ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.

-----3

ಸದರಿಯವರು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡಕೂಡದೆಂದು ತಿಳಿಸಿದೆ.

ಇವರ ಲೀನ್ ಅನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ವೈ.ಸಾಗರ), 22/12/2011
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
8. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಕೊಪ್ಪಳ.
9. ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವೃತ್ತ, ಬಳ್ಳಾರಿ.
10. ಶ್ರೀ ಪಿ.ಎ.ಭಜಂತ್ರಿ, ಕಾರ್ಯಪಾಲಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಕೊಪ್ಪಳ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ / ಸೇವೆಗಳು-ಸಿ).
12. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.